ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ:ಸಿ-2/ಆಡಳಿತ/LAQ-819/2024-25 ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ
ರಸ್ತೆ, ಬೆಂಗಳೂರು
ದಿನಾಂಕ:
07.2024

ಇವರಿಗೆ,
ಸರ್ಕಾರದ ಕಾರ್ಯದರ್ಶಿಗಳು,

ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ

ಬೆಂಗಳೂರು- 01

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಡಾ|| ಹೆಚ್.ಡಿ.
(ಕುಣಿಗಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ
ಸಂಖ್ಯೆ:819 ಕ್ಕೆ
ಉತ್ತರವನ್ನು ಸಲ್ಲಿಸುವ ಬಗ್ಗೆ.
*****

ಮಾನ್ಯ ವಿಧಾನಸಭೆ ಸದಸ್ಯರಾದ ಡಾ|| ಹೆಚ್.ಡಿ. (ಕುಣಿಗಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:819 ಕ್ಕೆ ಉತ್ತರವನ್ನು ಸಿದ್ದಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಕೃಷಿ
ನಿರ್ದೇಶಕರು

ಕರ್ನಾಟಕ ವಿಧಾನಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 819
2. ಸದಸ್ಯರ ಹೆಸರು : ಡಾ|| ಹೆಚ್ .ಡಿ . (ಕುಣಿಗಲ್)
3. ವಿಷಯ: ಅಧಿಕಾರಿ / ಸಿಬ್ಬಂದಿಗಳ ಭರ್ತಿ .
4. ಉತ್ತರಿಸಬೇಕಾದ ದಿನಾಂಕ : 24.07.2024.
5. ಉತ್ತರಿಸಬೇಕಾದವರು : ಮಾನ್ಯ ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ .
ಆ	ಸಿಬ್ಬಂದಿಗಳ ಕೊರತೆಯಿಂದ ರೈತರುಗಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)	ಖಾಲಿ ಇರುವ ಹುದ್ದೆಗಳಿಗೆ ಹಾಲಿ ಕಾರ್ಯನಿರ್ವಹಿಸುತ್ತಿರುವ ಲಭ್ಯವಿರುವ ಸಿಬ್ಬಂದಿಗಳನ್ನು ಅವರ ಕರ್ತವ್ಯಗಳ ಜೊತೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸಲಾಗಿದೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿಯಲ್ಲಿ ಸಹಾಯಕ ತಾಂತ್ರಿಕರ ಸೇವೆಯನ್ನು ಹಾಗೂ ಆತ್ಮ ಯೋಜನೆಯಡಿಯಲ್ಲಿ ಉಪಯೋಜನಾ ನಿರ್ದೇಶಕರು , ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಸೇವೆಯನ್ನು ಪಡೆಯಲಾಗಿರುತ್ತದೆ . ಪ್ರತಿ ರೈತ ಸಂಪರ್ಕ ಕೇಂದ್ರಕ್ಕೆ ಒಬ್ಬರಂತೆ ದಾಸ್ತಾನು ನಿರ್ವಹಣಾ ಸಿಬ್ಬಂದಿಗಳ ಸೇವೆಯನ್ನು ಹಾಗೂ ಖಾಲಿ ಇರುವ ಹುದ್ದೆಗಳಿಗನುಗುಣವಾಗಿ ಬೆರಳಚ್ಚುಗಾರರು , ವಾಹನ ಚಾಲಕರು, ಡಿ ಇವರುಗಳ ಸೇವೆಯನ್ನು ಸಹ ಬಳಸಿಕೊಂಡು ಸಕಾಲದಲ್ಲಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ .
ಇ	ಕೊರತೆ ಇರುವ ಅಧಿಕಾರಿ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?	i) ಸರ್ಕಾರದ ಪತ್ರ ಸಂಖ್ಯೆ : AGRI/245/AGS/2024, ದಿನಾಂಕ 06.02.2024 ರಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದಲ್ಲಿ ಕೆಳಕಂಡಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡಲಾಗಿದ್ದು , ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ . <table><tr><td>ವೃಂದಗಳು</td><td>ಹುದ್ದೆಗಳ ಸಂಖ್ಯೆ</td></tr><tr><td>ಕೃಷಿ ಅಧಿಕಾರಿ</td><td>100</td></tr><tr><td>ಸಹಾಯಕ ಕೃಷಿ</td><td>650</td></tr></table>

<table>
<tr>
<td></td>
<td></td>
<td>
<table>
<tr><td>ಅಧಿಕಾರಿ</td><td></td></tr>
<tr><td>ಒಟ್ಟು</td><td>750</td></tr>
</table>
iii) ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಉಳಿಕೆ ಮೂಲ ವೃಂದದಡಿ - 42 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗಿದೆ , ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ಉಳಿಕೆ ವೃಂದದಡಿ 53 ಹುದ್ದೆಗಳನ್ನು ಭರ್ತಿ ಮಾಡಲು ಅನುಮಾತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ . ಹಾಗೂ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಎಲ್ಲಾ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ .
</td>
</tr>
</table>

ಕೃಷಿ ನಿರ್ದೇಶಕರು